## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1738(1992) |
| ಮಾನ್ಯ ಸದಸ್ಯರ ಹೆಸರು | : | ಶ್ರೀ. ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೆಐಎಡಿಬಿ ವತಿಯಿಂದ ಸರ್ಕಾರ ಕೈಗಾರಿಕೆ ಉದ್ದೇಶಕ್ಕೆ ಮಂಜೂರು ಮಾಡಿದ್ದ ಜಮೀನನ್ನು ಕೈಗಾರಿಕೋದ್ಯಮಿಗಳು ದುರ್ಬಳಕೆ ಮಾಡಿಕೊಂಡಿರುವ ಪ್ರಕರಣಗಳು ಪತ್ತೆಯಾಗಿವೆಯೇ ಹಾಗಿದ್ದಲ್ಲಿ ಈ ಪ್ರಕರಣಗಳಲ್ಲಿ ಸಂಬಂಧಿತ ಹೆಸರು, ಜಮೀನಿನ ವಿವರಗಳ ಬಗ್ಗೆ ಸಂಪೂರ್ಣ ವಿವರಗಳನ್ನು ನೀಡುವುದು;( ಪ್ರಕರಣವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು) | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಅಭಿವೃದ್ಧಿಪಡಿಸುತ್ತಿರುವ ಕೈಗಾರಿಕಾ ಪ್ರದೇಶಗಳಲ್ಲಿ ಸಂಬಂಧಪಟ್ಟ ಯೋಜನಾ ಅನುಮೋದನಾ ಸಮಿತಿ (SHLCC/ SLSWCC/DLSWCC) ಸಭೆಗಳಲ್ಲಿ ಅನುಮೋದನೆಗೊಳ್ಳುವ ಯೋಜನೆಗಳಿಗೆ ಜಮೀನು ಹಂಚಿಕೆ ಮಾಡಲಾಗುತ್ತದೆ.<br><br>ಮುಂದುವರೆದು, ಉದ್ದಿಮೆದಾರರು ಮಂಡಳಿಯೊಂದಿಗೆ ನೆರವೇರಿಸಿಕೊಂಡ ಗುತ್ತಿಗೆ ಮತ್ತು ಮಾರಾಟ ಕರಾರು ಪತ್ರದ ಷರತ್ತು ಮತ್ತು ನಿಬಂಧನೆಗಳನ್ವಯ ಉದ್ದೇಶಿತ ಯೋಜನೆಯನ್ನು ಅನುಷ್ಠಾನಗೊಳಿಸಿದ ನಂತರ ಶುದ್ಧಕ್ರಯ ಪತ್ರವನ್ನು ನೆರವೇರಿಸಲಾಗುತ್ತದೆ.<br><br>ಶುದ್ಧಕ್ರಯ ಪತ್ರದಲ್ಲಿ ಕೈಗಾರಿಕೆ ಚಟುವಟಿಕೆಗೆ ಮಾತ್ರ ಬಳಕೆ ಮಾಡಬೇಕೆಂದು ಷರತ್ತು ವಿಧಿಸಲಾಗಿದ್ದು, ಸದರಿ ಷರತ್ತನ್ನು ಉಲ್ಲಂಘಿಸಿದಲ್ಲಿ ಕೆಐಎಡಿ ಕಾಯ್ದೆ ಮತ್ತು ನಿಯಮಗಳನ್ವಯ ಕಾನೂನು ಕ್ರಮ ಜರುಗಿಸಲಾಗುವುದೆಂದು ತಿಳಿಸಲಾಗಿರುತ್ತದೆ.<br><br>ಷರತ್ತು ಉಲ್ಲಂಘಿಸಿದ ಪ್ರಕರಣ ಕಂಡುಬಂದಲ್ಲಿ ಕಾನೂನು ರೀತಿ ಕ್ರಮವಹಿಸಲಾಗುತ್ತದೆ. |
| ಆ) | ಕೈಗಾರಿಕೆ ಉದ್ದೇಶಕ್ಕೆ ಹಂಚಿಕೆ ಮಾಡಲಾಗಿದ್ದ ಭೂಮಿಯನ್ನು ನಿಗಧಿತ ಉದ್ದೇಶಕ್ಕೆ ಬಳಸಿಕೊಳ್ಳದೆ ಅಥವಾ ಭಾಗಶಃ ಬಳಿಸಿಕೊಂಡು ಮಿಕ್ಕ ಜಮೀನನ್ನು ಬೇರೆಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ನಡೆದಿದೆಯೇ; (ಇಂಥ ಪ್ರಕರಣಗಳಲ್ಲಿ ಶಾಮೀಲಾಗಿರುವ ಸಂಸ್ಥೆ ಮತ್ತು ಜಮೀನಿನ ಸಂಪೂರ್ಣ ವಿವರ ನೀಡುವುದು) ದುರುಪಯೋಗ ಮಾಡಿದವರ ವಿರುದ್ಧ ಕೈಗೊಂಡ ಕ್ರಮಗಳೇನು; | |
| ಇ) | ಇಂತಹ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಎಷ್ಟು ಜಮೀನನ್ನು ಸರ್ಕಾರದ ವಶಕ್ಕೆ ಪಡೆಯಲಾಗಿದೆ ಇನ್ನು ಎಷ್ಟು ಪ್ರಮಾಣದ ಭೂಮಿ ವಶಪಡಿಸಿಕೊಳ್ಳಲು ಬಾಕಿ ಇದೆ (ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು) ಬಾಕಿ ಇರುವ ಭೂಮಿಯನ್ನು ಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | |

**ಸಂಖ್ಯೆ: ಸಿಐ 205 ಐಎಪಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು.